**ಸಾಕ್ಷಿಯನ್ನು ದಿಃ 19.02.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ ಪಿ.ಕೆ ವಕೀಲರಿಂದಃ**

1. ನಾನು ವ್ಯಾಪಾರ ಮಾಡುತ್ತಿರುವ ಬಗ್ಗೆ ಮತ್ತು ಆದಾಯದ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಿಲ್ಲ. ಬ್ಯಾಂಕ್ ಅಕೌಂಟ್ ಸ್ಟೇಟ್‌ಮೆಂಟ್ ಹಾಜರುಪಡಿಸಿಲ್ಲ. ನನಗೆ ಯಾವುದೇ ಕೆಲಸ ಇಲ್ಲ ಹಾಗೂ ಆದಾಯ ಇಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರಕ್ಕಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತ ಸರ್ವಿಸ್ ರಸ್ತೆಯಲ್ಲಿ ದೇವರಾಜ ಸರ್ಕಲ್ ಬಳಿ ಆಗಿರುತ್ತದೆ. ನಾನು ಅತಿ ವೇಗವಾಗಿ ಸ್ಕೂಟರ್ ಚಲಾಯಿಸಿದ ಕಾರಣ ಅಪಘಾತ ಆಗಿದೆ ಎಂದರೆ ಸರಿಯಲ್ಲ. ನನಗೆ ಕೇವಲ ತರಿಚಿದ ಗಾಯಗಾಗಿವೆ ಎಂದರೆ ಸರಿಯಲ್ಲ. ನಾನು ನಿರ್ಮಲ ಆಸ್ಪತ್ರೆಯಲ್ಲಿ ಅದೇ ದಿನ ಚಿಕಿತ್ಸೆ ಪಡೆದು ಹಿಂದಿರುಗಿದ್ದೇನೆ ಎಂದರೆ ಸರಿಯಲ್ಲ.

2. ಒಂದು ವಾರ ಒಳರೋಗಿಯಾಗಿದ್ದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಒಂದು ಲಕ್ಷ ಔಷಧಿಗೆ ಖರ್ಚು ಮಾಡಿದ್ದೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕುಮಾರ್ ಎಂಬ ವೈದ್ಯರು ನಿರ್ಮಲ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿರುತ್ತಾರೆ. ಸಂಪೂರ್ಣವಾಗಿ ಗುಣಮುಖವಾಗಿದ್ದೇನೆ ಎಂದು ಬಿಡುಗಡೆಗೊಳಿಸಿದ್ದಾರೆ ಎಂದರೆ ಸರಿಯಲ್ಲ. ನಾನು ಈಗ ಆರೋಗ್ಯವಾಗಿದ್ದು ಸಂಪೂರ್ಣವಾಗಿ ಗುಣಮುಖವಾಗಿದ್ದೇನೆ ಎಂದರೆ ಸರಿಯಲ್ಲ. ಬಲಗೈ ಮುರಿದಿರುವ ಕಾರಣ ಕೆಲಸ ಮಾಡಲು ಆಗುತ್ತಿಲ್ಲ ಪರಿಹಾರಕ್ಕಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೇ ಎಂದರೆ ಸರಿಯಲ್ಲ. ಅಪಘಾತದ ದಿನ ನನ್ನ ಸ್ಕೂಟರ್ ನಲ್ಲಿ ಹೋಗುತ್ತಿದ್ದೆ. ನನ್ನ ವಾಹನಕ್ಕೆ ವಿಮೆ ಇದೆ. ಆರ್ ಸಿ ನನ್ನ ಹೆಂಡತಿಯ ಹೆಸರಿನಲ್ಲಿ ಇದೆ. ನನಗೆ ಚಾಲನ ಪರವಾನಗಿ ಇತ್ತು. ನನ್ನ ಪಾಲಿಸಿಯನ್ನು ಹಾಜರುಪಡಿಸಿದ್ದೇನೆ. ನಮ್ಮ ವಿಮಾ ಕಂಪನಿಯಿಂದ ಪರಿಹಾರ ಪಡೆದಿಲ್ಲ. ಎದುರುದಾರರ ನಿದಾನವಾಗಿ ಹೋಗುತ್ತಿದ್ದು ಅವರ ತಪ್ಪಿನಿಂದ ಅಪಘಾತ ಆಗಿಲ್ಲ ಎಂದರೆ ಸರಿಯಲ್ಲ. ಔಷಧಿ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.